# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2023ರ ಮುಂಗಾರು ಹಂಗಾಮಿನಲ್ಲಿ ಬರ ಪರಿಸ್ಥಿತಿಯಿಂದ ಉಂಟಾದ ಬೆಳೆಹಾನಿಗೆ SDRF/NDRF Items of Expenditure ರ ಮಾರ್ಗಸೂಚಿಗಳ ಪ್ರಕಾರ ಅರ್ಹತೆಯ ಅನುಸಾರ ಈಗಾಗಲೇ ಅರ್ಹ ರೈತರಿಗೆ ಗರಿಷ್ಟ ರೂ.2000/-ರವರೆಗೆ ಅರ್ಹತೆಯಂತೆ ಪಾವತಿಸಿರುವ ಬೆಳೆಹಾನಿ ಪರಿಹಾರ ಮೊತ್ತವನ್ನು ಪರಿಗಣನೆಗೆ ತೆಗೆದುಕೊಂಡು, ಅರ್ಹತೆಯಂತೆ ಇನ್ನುಳಿದ ಬಾಕಿ ಬೆಳೆಹಾನಿ ಪರಿಹಾರ ಮೊತ್ತವನ್ನು ಪಾವತಿಸಲು - ಅನುದಾನ ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಪತ್ರ ಸಂಖ್ಯೆ: ಕಂಇ 484 ಟಿಎನ್‌ಆರ್ 2023, ದಿನಾಂಕ:15-11-2023.
2. SDRF/NDRFರಡಿ ಪಾವತಿಸಬಹುದಾದ ಪರಿಹಾರ ಮೊತ್ತದ Items of Expenditure ರ ಬಗ್ಗೆ ಭಾರತ ಸರ್ಕಾರದ ಗೃಹ ಮಂತ್ರಾಲಯ ದಿನಾಂಕ:11.07.2023 ರಂದು ಹೊರಡಿಸಿರುವ ಮಾರ್ಗಸೂಚಿ ಸಂಖ್ಯೆ:33-03/2020-NDM-I.
3. ಸರ್ಕಾರದ ಆದೇಶ ಸಂಖ್ಯೆ: ಕಂಇ/560/ಇಟಿಸಿ/2023, ದಿನಾಂಕ: 05.01.2024, 16.01.2024 ಮತ್ತು 22.01.2024.
4. ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಆಯುಕ್ತರ ಪತ್ರ ಸಂಖ್ಯೆ: ಕಂಇ 32 ಟಿಎನ್‌ಆರ್ 2024 ದಿನಾಂಕ: 16.01.2024, 22.01.2024, 17.01.2024 ಮತ್ತು 01.04.2024 ರಲ್ಲಿ ನೀಡಿರುವ ಉಪಯೋಗಿತಾ ಪ್ರಮಾಣ ಪತ್ರ.
5. ಭಾರತ ಸರ್ಕಾರದ ಹಣಕಾಸು ಮಂತ್ರಾಲಯದ ಪತ್ರ ಸಂಖ್ಯೆ:13(31)/ಎಫ್ ಸಿಡಿ/23-24, ದಿನಾಂಕ: 26.04.2024.

* * * * *

**ಪ್ರಸ್ತಾವನೆ:**

2023ನೇ ಸಾಲಿನ ನೈರುತ್ಯ ಮುಂಗಾರು ಹಂಗಾಮಿನ ವೈಫಲ್ಯ / ಮಳೆಕೊರತೆ ಕಂಡು ಬಂದ ಹಿನ್ನೆಲೆಯಲ್ಲಿ, ಕೇಂದ್ರ ಸರ್ಕಾರದ ಬರ ಕೈಪಿಡಿ-2020 ರಲ್ಲಿ ಬರ

ಪರಿಸ್ಥಿತಿ ಘೋಷಿಸಲು ಅನುಸರಿಸಬೇಕಾದ ಮಾನದಂಡಗಳಂತೆ, ನಿಯಮಾನುಸಾರ ಪರಿಶೀಲಿಸಿ, ರಾಜ್ಯದ 223 ತಾಲ್ಲೂಕುಗಳನ್ನು (196 ತೀವ್ರ ಬರ & 27 ಸಾಧರಣ ಬರ) ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿರುತ್ತದೆ. ಭಾರತ ಸರ್ಕಾರದಿಂದ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯಿಂದ (NDRF) ಅನುದಾನವನ್ನು ನಿರೀಕ್ಷಿಸಿ, ಭಾರತ ಸರ್ಕಾರದ ಗೃಹ ಮಂತ್ರಾಲಯವು SDRF/NDRF ರಡಿ ನೀಡಬಹುದಾದ ಪರಿಹಾರ ಮೊತ್ತದ ಬಗ್ಗೆ ಮೇಲೆ (2)ರಲ್ಲಿ ಓದಲಾದ ದಿನಾಂಕ:11/07/2023ರ Items of Expenditure ಮಾರ್ಗಸೂಚಿಗಳ ಅನುಸಾರ ಬೆಳೆಹಾನಿ ಪರಿಹಾರದ ಮೊದಲನೇ ಕಂತಾಗಿ ಅಥವಾ ಬೆಳೆಹಾನಿ ಪರಿಹಾರವಾಗಿ ಅರ್ಹತೆಯ ಅನುಗುಣವಾಗಿ ಪ್ರತಿ ಅರ್ಹ ರೈತರಿಗೆ ಗರಿಷ್ಟ ರೂ.2,000/- ರವರೆಗೆ, ಗರಿಷ್ಠ 02 ಹೆಕ್ಟೇರ್‌ಗೆ ಸಿಮೀತಗೊಳಿಸಿ ಕೆಲವೊಂದು ಷರತ್ತುಗಳ ಪಾಲನೆಗೊಳಪಡಿಸಿ ಪಾವತಿಸಲು ಮೇಲೆ (3) ರಲ್ಲಿ ಓದಲಾದ ದಿನಾಂಕ: 05.01.2024ರ ಸರ್ಕಾರದ ಆದೇಶದಲ್ಲಿ ರೂ.105.00 ಕೋಟಿಗಳನ್ನು, ದಿನಾಂಕ:16.01.2024ರ ಸರ್ಕಾರಿ ಆದೇಶದಲ್ಲಿ ರೂ.237.53 ಕೋಟಿಗಳನ್ನು ಹಾಗೂ ದಿನಾಂಕ:22.01.2024ರ ಸರ್ಕಾರಿ ಆದೇಶದಲ್ಲಿ ರೂ.342.47 ಕೋಟಿಗಳಂತೆ ಒಟ್ಟು ರೂ.685.00 ಕೋಟಿಗಳನ್ನು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಆಯುಕ್ತರಿಗೆ ಬಿಡುಗಡೆ ಮಾಡಲಾಗಿದ್ದು, ಅದರಂತೆ, ಈ ಮೊತ್ತವನ್ನು ರಾಜ್ಯದಲ್ಲಿ ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಿರುವ 223 ತಾಲ್ಲೂಕುಗಳಲ್ಲಿ ನಿಯಮಾನುಸಾರ ಅರ್ಹವಿರುವ 33,55,599 ಫಲಾನುಭವಿ ರೈತರುಗಳಿಗೆ ಅರ್ಹತೆಯನುಸಾರ ಒಟ್ಟು ಮೊತ್ತ ರೂ.6364466128/-ಗಳನ್ನು ಬೆಳೆಹಾನಿ ಪರಿಹಾರವಾಗಿ ಪಾವತಿಸಲಾಗಿರುತ್ತದೆಂದು ತಿಳಿಸುತ್ತಾ, ಉಪಯೋಗಿತಾ ಪ್ರಮಾಣ ಪತ್ರವನ್ನು ಮೇಲೆ (4)ರಲ್ಲಿ ಓದಲಾದ ದಿನಾಂಕ:01.04.2024ರ ಪತ್ರದಲ್ಲಿ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ, ಆಯುಕ್ತರು ನೀಡಿರುತ್ತಾರೆ.

ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯಿಂದ (NDRF) ಆರ್ಥಿಕ ನೆರವನ್ನು ನೀಡುವಂತೆ, ಸೂಕ್ತ ನಿರ್ದೇಶನವನ್ನು ಭಾರತ ಸರ್ಕಾರಕ್ಕೆ ನೀಡುವಂತೆ ರಾಜ್ಯ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 210/2024ನ್ನು ದಾಖಲಿಸಿದ್ದು, ಇನ್ನು ಬಾಕಿ ಇರುತ್ತದೆ.

ಭಾರತ ಸರ್ಕಾರದ ಆರ್ಥಿಕ ಮಂತ್ರಾಲಯವು ಮೇಲೆ (5)ರಲ್ಲಿ ಓದಲಾದ ದಿನಾಂಕ:26.04.2024ರ ಪತ್ರದಲ್ಲಿ, ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯಿಂದ (NDRF) 2023ನೇ ಸಾಲಿನ ಮುಂಗಾರು (Kharif) ಬರ ಪರಿಹಾರಕ್ಕಾಗಿ ರೂ. 3454.22 ಕೋಟಿಗಳನ್ನು ರಾಜ್ಯಕ್ಕೆ ಬಿಡುಗಡೆ ಮಾಡಿರುತ್ತದೆ.

ಭಾರತ ಸರ್ಕಾರದ ಗೃಹ ಮಂತ್ರಾಲಯವು SDRF/NDRF ರಡಿ ನೀಡಬಹುದಾದ ಪರಿಹಾರ ಮೊತ್ತದ ಬಗ್ಗೆ ಮೇಲೆ (2)ರಲ್ಲಿ ಓದಲಾದ ದಿನಾಂಕ:11/07/2023ರ Items of Expenditure ಮಾರ್ಗಸೂಚಿಗಳ ಪ್ರಕಾರ ನಿಯಮಾನುಸಾರ ಈಗಾಗಲೇ ಅರ್ಹ ರೈತರಿಗೆ ಗರಿಷ್ಟ ರೂ.2000/-ರವರೆಗೆ ಅರ್ಹತೆಯಂತೆ ಪಾವತಿಸಿರುವ ಬೆಳೆಹಾನಿ ಪರಿಹಾರ ಮೊತ್ತವನ್ನು ಪರಿಗಣನೆಗೆ ತೆಗೆದುಕೊಂಡು, ಅರ್ಹತೆಯಂತೆ

ಪಾವತಿಸಬೇಕಾಗಿರುವ ಇನ್ನುಳಿದ ಬಾಕಿ ಬೆಳೆಹಾನಿ ಪರಿಹಾರ ಮೊತ್ತವನ್ನು ನಿಯಮಾನುಸಾರ ಅರ್ಹ ರೈತ ಫಲಾನುಭವಿಗಳಿಗೆ ಪಾವತಿಸಲು ಭಾರತ ಸರ್ಕಾರದಿಂದ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ (NDRF)ರಡಿ ಬಿಡುಗಡೆಯಾಗಿರುವ ರೂ.3454.22 ಕೋಟಿಗಳನ್ನು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ, ಆಯುಕ್ತರಿಗೆ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿ, ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ:ಕಂಇ/560/ಟಿಎನ್‌ಆರ್/2023, ಬೆಂಗಳೂರು; ದಿನಾಂಕ:02/05/2024

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಭಾರತ ಸರ್ಕಾರದ ಗೃಹ ಮಂತ್ರಾಲಯವು SDRF/NDRF ರಡಿ ನೀಡಬಹುದಾದ ಪರಿಹಾರ ಮೊತ್ತದ ಬಗ್ಗೆ ಮೇಲೆ (2)ರಲ್ಲಿ ಓದಲಾದ ದಿನಾಂಕ:11/07/2023ರ Items of Expenditure ಮಾರ್ಗಸೂಚಿಗಳ ಪ್ರಕಾರ ನಿಯಮಾನುಸಾರ ಈಗಾಗಲೇ ಅರ್ಹ ರೈತರಿಗೆ ಗರಿಷ್ಟ ರೂ.2000/-ರವರೆಗೆ ಅರ್ಹತೆಯಂತೆ ಪಾವತಿಸಿರುವ ಬೆಳೆಹಾನಿ ಪರಿಹಾರ ಮೊತ್ತವನ್ನು ಪರಿಗಣನೆಗೆ ತೆಗೆದುಕೊಂಡು, ಅರ್ಹತೆಯಂತೆ ಇನ್ನುಳಿದ ಬಾಕಿ ಬೆಳೆಹಾನಿ ಪರಿಹಾರ ಮೊತ್ತವನ್ನು, ಮೇಲೆ (3)ರಲ್ಲಿ ಓದಲಾದ ದಿನಾಂಕ:05.01.2024ರ ಸರ್ಕಾರಿ ಆದೇಶದಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳ ಪಾಲನೆಗೆ ಒಳಪಟ್ಟು, ನಿಯಮಾನುಸಾರ ಅರ್ಹ ರೈತರಿಗೆ ಪಾವತಿಸಲು ಭಾರತ ಸರ್ಕಾರದಿಂದ ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿ (NDRF)ರಡಿ ಬಿಡುಗಡೆಯಾಗಿರುವ ರೂ. 3454.22 ಕೋಟಿಗಳನ್ನು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ, ಆಯುಕ್ತರಿಗೆ ಬಿಡುಗಡೆ ಮಾಡಿ, ಆದೇಶಿಸಿದೆ.

ಈ ಮೊತ್ತವನ್ನು ಲೆಕ್ಕ ಶೀರ್ಷಿಕೆ:"2245-80-102-0-01-059" ರಡಿ ಭರಿಸತಕ್ಕದ್ದು.

ಬಿಡುಗಡೆ ಮಾಡಿರುವ ಅನುದಾನವನ್ನು ಸರ್ಕಾರದ ಅಧೀನ ಕಾರ್ಯದರ್ಶಿ ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ & ಸೇವೆಗಳು-3) ಇವರು ಲೆಕ್ಕ ಶೀರ್ಷಿಕೆ "2245-80-102-0-01-059" ರಡಿ ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಆಯುಕ್ತರ ಡ್ರಾಯಿಂಗ್ ಕೋಡ್ 265400 ಗೆ ಅಪ್‌ಲೋಡ್ ಮಾಡುವುದು.

ಪರಿಹಾರ ತಂತ್ರಾಂಶವನ್ನು ನಿರ್ವಹಣೆ ಮಾಡುತ್ತಿರುವ ಭೂಮಿ ಉಸ್ತುವಾರಿ ಕೋಶವು ದಿನಾಂಕ:05/01/2024ರ ಸರ್ಕಾರಿ ಆದೇಶ ಸಂಖ್ಯೆ: ಕಂಇ 560 ಇಟಿಸಿ 2023ರಲ್ಲಿ ಹಾಗೂ ಈ ಆದೇಶದಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ಚಾಚುತಪ್ಪದೇ ಪಾಲಿಸತಕ್ಕದ್ದು.

ಸದರಿ ಅನುದಾನವನ್ನು ಅರ್ಹತೆಯ ಮತ್ತು ನಿಯಮಾನುಸಾರ, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಆಯುಕ್ತರು ಖಜಾನೆ-2 ರಡಿ CTS-5 ರಶೀದಿ ಮತ್ತು ನೇರ ನಗದು ವರ್ಗಾವಣೆ (DBT) ವೇದಿಕೆಯ ಮೂಲಕ ನಿಯಮಾನುಸಾರ

ಅರ್ಹ ಫಲಾನುಭವಿಗಳ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗೆ ನೇರವಾಗಿ ವರ್ಗಾಯಿಸುವುದು.

**<u>ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಹಾಗೂ ಇತರರು ತೆಗೆದುಕೊಳ್ಳಬೇಕಾದ ಕ್ರಮಗಳು:-</u>**

1) ಜಿಲ್ಲಾಧಿಕಾರಿಗಳ ಕಛೇರಿ, ಉಪ ವಿಭಾಗಾಧಿಕಾರಿಗಳ ಕಛೇರಿ ಹಾಗೂ ತಹಶೀಲ್ದಾರ್‌ರವರ ಕಛೇರಿಗಳಲ್ಲಿ ರೈತರುಗಳಿಗೆ ಮಾಹಿತಿ ನೀಡಲು Help Desk ಗಳನ್ನು ಕೂಡಲೇ ತೆರೆಯತಕ್ಕದ್ದು.

2) ಅರ್ಹ ಫಲಾನುಭವಿ ರೈತರುಗಳಿಗೆ ಈಗಾಗಲೇ ಪಾವತಿಯಾಗಿರುವ ಬೆಳೆ ಹಾನಿ ಪರಿಹಾರದ ವಿವರಗಳನ್ನು ಹಾಗೂ ಅರ್ಹತೆಗನುಗುಣವಾಗಿ ನಿಯಮಾನುಸಾರ ಪ್ರಸ್ತುತ ಪಾವತಿಸಲಾಗುತ್ತಿರುವ ಇನ್ನುಳಿದ ಬಾಕಿ ಬೆಳೆಹಾನಿ ಪರಿಹಾರ ಮೊತ್ತದ ವಿವರಗಳನ್ನು ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ, ಉಪ ವಿಭಾಗಾಧಿಕಾರಿಗಳ ಕಛೇರಿ, ತಹಶೀಲ್ದಾರ್‌ರವರ ಕಛೇರಿಗಳಲ್ಲಿ ಮತ್ತು ರೈತ ಸಂಪರ್ಕ ಕೇಂದ್ರಗಳಲ್ಲಿ ಹಾಗೂ ಜಿಲ್ಲಾಧಿಕಾರಿಗಳ ಅಧಿಕೃತ ಜಾಲತಾಣಗಳಲ್ಲಿ ಸಾರ್ವಜನಿಕರ / ರೈತರುಗಳ ಮಾಹಿತಿಗಾಗಿ ಪ್ರಚುರಪಡಿಸತಕ್ಕದ್ದು.

3) ಬಿಡುಗಡೆ ಮಾಡಿರುವ ಮೊತ್ತವನ್ನು ವಿಧಿಸಿರುವ ಷರತ್ತುಗಳನ್ವಯ ನಿಯಮಾನುಸಾರ ಉಪಯೋಗಿಸಿಕೊಂಡಿರುವುದಕ್ಕೆ, ಉಪಯೋಗಿತ ಪ್ರಮಾಣ ಪತ್ರವನ್ನು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಆಯುಕ್ತರು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 498/ವೆಚ್ಚ-7/2024, ದಿನಾಂಕ:02/05/2024ರಲ್ಲಿ ನೀಡಿರುವ ಸಹಮತಿಯ ಮೇರೆಗೆ, ಈ ಆದೇಶವನ್ನು ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಸ್.ಆರ್. ಶಿವಶಂಕರ್)**
ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ,
(ವಿಪತ್ತು ನಿರ್ವಹಣೆ ಮತ್ತು ನೋಂ. & ಮು.)

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (A&E) ಹಾಗೂ (E & RSA), ಕರ್ನಾಟಕ, ಪಿ.ಬಿ.ನಂ. 5369, ಪಾರ್ಕ್ ಹೌಸ್ ರೋಡ್, ಬೆಂಗಳೂರು.

2) ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ, ಪಿ.ಬಿ.ನಂ. 5398, ಪಾರ್ಕ್ ಹೌಸ್ ರೋಡ್, ಬೆಂಗಳೂರು.

3) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4) ಮುಖ್ಯ ಚುನಾವಣಾ ಅಧಿಕಾರಿ, ಕರ್ನಾಟಕ ರಾಜ್ಯ, ಶೇಷಾದ್ರಿ ರಸ್ತೆ, ಬೆಂಗಳೂರು-560001 - ರವರ ಮಾಹಿತಿಗಾಗಿ.
5) ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬೆಂಗಳೂರು.
6) ಕಂದಾಯ ಆಯುಕ್ತರು, ಕಂದಾಯ ಇಲಾಖೆ (ಭೂ ಮಾಪನ ಮತ್ತು ಭೂಮಿ), ಬಹುಮಹಡಿ ಕಟ್ಟಡ, ಬೆಂಗಳೂರು.
7) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
8) ಜಂಟಿ ನಿರ್ದೇಶಕರು, ಖಜಾನೆ ಆಯುಕ್ತಾಲಯ, ಕೆ.ಪಿ.ಸಿ.ಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
9) ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
10) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-7 & 8), ವಿಧಾನ ಸೌಧ, ಬೆಂಗಳೂರು.

**ಪ್ರತಿ:**

1) ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
2) ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿರವರುಗಳ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಬಹುಮಹಡಿ ಕಟ್ಟಡ, ಬೆಂಗಳೂರು.
4) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5) ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ತೋಟಗಾರಿಕೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6) ಸರ್ಕಾರದ ಉಪ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬಹುಮಹಡಿ ಕಟ್ಟಡ, ಬೆಂಗಳೂರು.
7) ಲೆಕ್ಕ ಪತ್ರ ಶಾಖೆ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ).
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.